## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 412 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | : | 10.07.2023 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಸುತ್ತಮುತ್ತಲಿನ ಸರ್ಕಾರಿ ಆಸ್ಪತ್ರೆಗಳು ಮೂಲಭೂತ ಸೌಕರ್ಯಗಳ ಕೊರತೆಯಿಂದಾಗಿ ಸಾರ್ವಜನಿಕರು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೆಂಗಳೂರು ನಗರದ ಸುತ್ತಮುತ್ತಲಿನ ಸರ್ಕಾರಿ ಆಸ್ಪತ್ರೆಗಳಲ್ಲಿ ಸಾರ್ವಜನಿಕರ ಉಪಯೋಗಕ್ಕಾಗಿ ಆಯಾ ಆಸ್ಪತ್ರೆಗಳ ಅವಶ್ಯಕತೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಆಸ್ಪತ್ರೆಗಳಲ್ಲಿ ಕೆಲವು ಮೂಲಭೂತ ಸೌಕರ್ಯಗಳ ದುರಸ್ಥಿ ಕಾರ್ಯಗಳನ್ನು ಆಗಿಂದಾಗ್ಗೆ ಕೈಗಳ್ಳಲಾಗಿದೆ. |
| ಆ) | ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವ ಆಸ್ಪತ್ರೆಗಳು ಯಾವುವು; (ವಿಧಾನಸಭಾವಾರು ಪಟ್ಟಿ ಒದಗಿಸುವುದು) | ಬೆಂಗಳೂರು ನಗರದ ಸುತ್ತಮುತ್ತಲಿನ ಆಸ್ಪತ್ರೆಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಆದಾಗ್ಯೂ ಯಾವುದೇ ಆಸ್ಪತ್ರೆಯ ಮೂಲಭೂತ ಸೌಲಭ್ಯಗಳಿಗೆ ಕೋರಿಕೆ ಬಂದಲ್ಲಿ ಅವಶ್ಯಕತೆ ಹಾಗೂ ಅನುದಾನದ ಲಭ್ಯತೆಗನುಗುಣವಾಗಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ವಹಿಸಲಾಗುವುದು. |
| ಇ) | ನಗರದ ಕೆ.ಸಿ.ಜನರಲ್ ಆಸ್ಪತ್ರೆಯನ್ನು ಅಂದಾಜು 10 ಕೋಟಿ ರೂ. ವೆಚ್ಚದಲ್ಲಿ ಮೇಲ್ದರ್ಜೆಗೇರಿಸುವ ಮೂಲಕ ವಿವಿಧ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಮುಂದಾಗಿದೆಯೇ; | ನಗರದ ಕೆ.ಸಿ.ಜನರಲ್ ಆಸ್ಪತ್ರೆಯು ಸುಮಾರು 75 ವರ್ಷಗಳ ಹಿಂದೆ ನಿರ್ಮಾಣ ಮಾಡಲಾಗಿದೆ. ಮುಖ್ಯವಾಗಿ ಆಸ್ಪತ್ರೆಯ ಮೇಲ್ಛಾವಣಿ ಸೋರುವಿಕೆ, ಕಿಟಕಿ ಬಾಗಿಲುಗಳು ದುರಸ್ಥಿಗೊಳಪಟ್ಟಿರುವುದು, ಶೌಚಾಲಯಗಳಲ್ಲಿ ನೀರಿನ ವ್ಯವಸ್ಥೆ ಮತ್ತು ನೈರ್ಮಲ್ಯೀಕರಣದ ವ್ಯವಸ್ಥೆಯ ದುರಸ್ಥಿ ಮತ್ತು ವಿದ್ಯುತ್ ಜಾಲದ ವ್ಯವಸ್ಥೆ ಹದಗೆಟ್ಟಿರುತ್ತದೆ ಹಾಗೂ ಹೊಸದಾಗಿ ಶವಾಗಾರ ಕೊಠಡಿಯನ್ನು ನಿರ್ಮಿಸಬೇಕಾಗಿರುತ್ತದೆ. ಈ ದುರಸ್ಥಿ ಕಾಮಗಾರಿಗಳನ್ನು ಹಾಗೂ ಸ್ಥಳೀಯ ವೈದ್ಯರುಗಳ ಸಲಹೆಯ ಮೇರೆಗೆ ಕೆಲವೊಂದು ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸುವ ರೂ.998.00 ಲಕ್ಷಗಳ ಅಂದಾಜು ಪಟ್ಟಿಯು ಪರಿಶೀಲನೆಯಲ್ಲಿದೆ. |
| ಈ) | ಇದೇ ಮಾದರಿಯಲ್ಲಿ ಇತರೆ ಭಾಗಗಳಲ್ಲಿನ ಆಸ್ಪತ್ರೆಗಳಿಗೂ ಸಹ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಸಾರ್ವಜನಿಕರಿಗೆ ಸರ್ಕಾರ ಅನುಕೂಲ ಮಾಡಿಕೊಡಲಾಗುವುದೇ? | • ಜಯನಗರ ಸಾರ್ವಜನಿಕ ಆಸ್ಪತ್ರೆ ಬೆಂಗಳೂರು ಇಲ್ಲಿನ ಆಸ್ಪತ್ರೆಯ ಮೂಲಭೂತ ಸೌಕರ್ಯ, ದುರಸ್ಥಿ ಮತ್ತು ನವೀಕರಣ ಕಾಮಗಾರಿಯ ರೂ.995.00 ಲಕ್ಷಗಳ ಅಂದಾಜು ಪಟ್ಟಿಯು ಪರಿಶೀಲನೆಯಲ್ಲಿದೆ.<br>• ಬೆಂಗಳೂರು ನಗರದ ಸುತ್ತಮುತ್ತಲಿನಲ್ಲಿ ಬರುವ ಇತರ ಆಸ್ಪತ್ರೆಗಳಲ್ಲಿ ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಆದಾಗ್ಯೂ ಯಾವುದೇ ಆಸ್ಪತ್ರೆಯ ಮೂಲಭೂತ ಸೌಕರ್ಯಗಳಿಗೆ ಕೋರಿಕೆ ಬಂದಲ್ಲಿ ಅವಶ್ಯಕತೆ ಹಾಗೂ ಅನುದಾನದ ಲಭ್ಯತೆಗನುಗುಣವಾಗಿ ಒದಗಿಸಲು ಕ್ರಮ ವಹಿಸಲಾಗುವುದು. |

ಆಕುಕ 58 ಎಸ್‌ಎಂಎಂ 2023

(ದಿನೇಶ್ ಗುಂಡೂರಾವ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಸಚಿವರು

Scanned with OKEN Scanner